# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಸರ್ಕಾರದ ವೆಚ್ಚಗಳಲ್ಲಿ ಕಟ್ಟುನಿಟ್ಟಿನ ಆರ್ಥಿಕ ಮಿತವ್ಯಯ ಕ್ರಮಗಳ ಪಾಲನೆ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ ಆಇ 1 ಬಿಇಎಂ 2005 ದಿನಾಂಕ : 21-6-2005.
2. ಸರ್ಕಾರದ ಆದೇಶ ಸಂಖ್ಯೆ ಆಇ 1 ಬಿಇಎಂ 2005 ದಿನಾಂಕ : 27-6-2005.
3. ಸರ್ಕಾರದ ಆದೇಶ ಸಂಖ್ಯೆ ಆಇ 7 ಬಿಇಎಂ 2007 ದಿನಾಂಕ : 17-10-2007.

*******

ಪ್ರಸ್ತಾವನೆ :

ಮೇಲೆ ಓದಲಾದ ದಿನಾಂಕ: 27-6-2005ರ ಸರ್ಕಾರಿ ಆದೇಶದಲ್ಲಿ ಆಡಳಿತ ಇಲಾಖೆಯು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 32ರನ್ವಯ ಅಧಿಕಾರಿ/ನೌಕರರನ್ನು ಆರು ತಿಂಗಳ ಅಲ್ಪಾವಧಿಗೆ ಮಾತ್ರ ಸ್ವತಂತ್ರ ಪ್ರಭಾರದಲ್ಲಿ ಇರಿಸಬಹುದೆಂದು ಮತ್ತು ಸ್ವತಂತ್ರ ಪ್ರಭಾರದಲ್ಲಿರುವ ಅಧಿಕಾರಿಗಳು/ನೌಕರರಿಗೆ ಪೂರ್ವಾನ್ವಯವಾಗಿ ಬಡ್ತಿ ನೀಡಲು ತೀರ್ಮಾನಿಸಿದ್ದಲ್ಲಿ ಇಂತಹ ಪ್ರಕರಣಗಳಿಗೆ ಕಡ್ಡಾಯವಾಗಿ ಆರ್ಥಿಕ ಇಲಾಖೆಯ ಪೂರ್ವಾನುಮತಿ ಪಡೆಯತಕ್ಕದ್ದು ಎಂದು ತಿಳಿಸಲಾಗಿತ್ತು. ಆದರೆ ಇಂತಹ ಪ್ರಕರಣಗಳು ಗಮನಾರ್ಹವಾಗಿ ಆರ್ಥಿಕ ಇಲಾಖೆಗೆ ಬರುತ್ತಿರುವುದರಿಂದ ಮತ್ತು ಇಲಾಖಾ ಕಾರ್ಯದರ್ಶಿಗಳಿಗೆ ಈಗಾಗಲೇ ಆರು ತಿಂಗಳಿಗೂ ಹೆಚ್ಚಿನ ಅವಧಿಗೆ ಪ್ರಭಾರ ವ್ಯವಸ್ಥೆಯನ್ನು ಮಂಜೂರು ಮಾಡಲು ಆರ್ಥಿಕ ಅಧಿಕಾರವನ್ನು ಪ್ರತ್ಯಾಯೋಜಿಸಿರುವುದನ್ನು ಗಮನಿಸಿದ ಸರ್ಕಾರವು ಮೇಲೆ ಓದಲಾದ ದಿನಾಂಕ: 17.10.2007 ರ ಆದೇಶದಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸುವ ಷರತ್ತನ್ನು ಸಡಿಲಿಸಿ ಇಂತಹ ಪ್ರಭಾರ ವ್ಯವಸ್ಥೆಯನ್ನು ಖಾಲಿ ಇರುವ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಅಥವಾ ಬಡ್ತಿ ಮೂಲಕ ಭರ್ತಿ ಮಾಡುವ ಅವಧಿಯವರೆಗೆ ಮಾಡಲು ಸೂಚಿಸಿದೆ ಮತ್ತು ಪೂರ್ವಾನ್ವಯವಾಗಿ ಬಡ್ತಿ ನೀಡುವ ಪ್ರಕರಣಗಳಿಗೆ ಆರ್ಥಿಕ ಇಲಾಖೆಯ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯಲು ಸಹ ಸೂಚಿಸಲಾಗಿದೆ. ಪೂರ್ವಾನ್ವಯವಾಗಿ ಬಡ್ತಿ ನೀಡುವ ಪ್ರಕರಣಗಳಿಗೆ ಆರ್ಥಿಕ ಇಲಾಖೆಯ ಪೂರ್ವಾನುಮತಿಯನ್ನು ಪಡೆಯಬೇಕೆಂಬ ಸರ್ಕಾರದ ಈ ಕ್ರಮದಿಂದ ಪದೋನ್ನತಿ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿರುವುದನ್ನು ಗಮನಿಸಿದ ಸರ್ಕಾರವು ಈ ಕೆಳಗಿನ ಆದೇಶವನ್ನು ಹೊರಡಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ : ಆಇ 6 ಬಿಇಎಂ 2007
## ಬೆಂಗಳೂರು, ದಿನಾಂಕ 28ನೇ ನವೆಂಬರ್ 2007

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 32ರನ್ವಯ ಸ್ವತಂತ್ರ ಪ್ರಭಾರದಲ್ಲಿ ಇರುವ ಅಧಿಕಾರಿಗಳು / ನೌಕರರಿಗೆ ಪೂರ್ವಾನ್ವಯವಾಗಿ ಬಡ್ತಿ ನೀಡುವ ಅಧಿಕಾರವನ್ನು ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿದೆ. ಆದರೆ ಇಲಾಖಾ ಕಾರ್ಯದರ್ಶಿಗಳು ಪೂರ್ವಾನ್ವಯ ಬಡ್ತಿ ನೀಡಲು ತೀರ್ಮಾನ ತೆಗೆದುಕೊಳ್ಳುವ ಮುನ್ನ ಈ ಕೆಳಕಂಡ ಅಂಶಗಳನ್ನು ಗಮನಿಸಲು ಕೋರಲಾಗಿದೆ.

1. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಈ ಕೆಳಗೆ ತಿಳಿಸಿರುವ ಸುತ್ತೋಲೆಗಳಲ್ಲಿ ಸೂಚಿಸಿರುವ ಎಲ್ಲಾ ನಿಬಂಧನೆಗಳನ್ನು ಮತ್ತು ಅಲ್ಲಿ ನಿಗದಿಪಡಿಸಿದ ಎಲ್ಲಾ ಷರತ್ತುಗಳನ್ನು ಪಾಲಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು

(i). ಸುತ್ತೋಲೆ ಸಂಖ್ಯೆ : ಸಿಆಸುಇ 17 ಎಸ್ ಆರ್ ಆರ್ 1979 ದಿನಾಂಕ: 4-6-1979
(ii). ಸುತ್ತೋಲೆ ಸಂಖ್ಯೆ : ಸಿಆಸುಇ 1 ಐಎಸ್‌ಆರ್‌ಸಿ 1983 ದಿನಾಂಕ: 20-8-1983
(iii). ಸುತ್ತೋಲೆ ಸಂಖ್ಯೆ : ಸಿಆಸುಇ 1 ಐಎಸ್‌ಆರ್‌ಸಿ 1983 ದಿನಾಂಕ 20-9-1983

2. ಬಡ್ತಿ ಹುದ್ದೆಗಳನ್ನು ತುಂಬುವುದಕ್ಕೆ ಸಂಬಂಧಿಸಿದಂತೆ ಆರ್ಥಿಕ ಮಿತವ್ಯಯ ಕ್ರಮಗಳಿಂದ ಇಲಾಖೆಗಳಿಗೆ ವಿನಾಯಿತಿ ನೀಡಿರುವ ಆದೇಶ ಸಂಖ್ಯೆ : ಆಇ 1 ಬಿಇಎಂ 2005 ದಿನಾಂಕ : 21.6.2005 ರಲ್ಲಿ ಸೂಚಿಸಿರುವ ಈ ಕೆಳಗಿನ ಷರತ್ತುಗಳನ್ನು ಪಾಲಿಸಲಾಗಿದೆಯೇ ಎಂಬುದನ್ನು ಪರಿಶೀಲಿಸುವುದು.

(ಅ). ಅನಧಿಕೃತ ಟಿಪ್ಪಣಿ ಸಿಆಸುಇ 2 ಈಆಎಂ 2004 ದಿನಾಂಕ 1-3-2004ರಲ್ಲಿ ತಿಳಿಸಿರುವಂತೆ ಅಧಿಕಾರಯುತ ಸಮಿತಿಯು ಶಿಫಾರಸ್ಸು ಮಾಡಿರುವ ದಿನಾಂಕ 1-4-2000ರಲ್ಲಿದ್ದಂತೆ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶೇಕಡ 20ರಷ್ಟು ಖಾಲಿ ಹುದ್ದೆಗಳು, ಪೋಲೀಸ್ ಮತ್ತು ಅರಣ್ಯ ಇಲಾಖೆಗಳಲ್ಲಿ ಶೇಕಡ 50ರಷ್ಟು ಖಾಲಿ ಹುದ್ದೆಗಳು ಮತ್ತು ಇತರ ಇಲಾಖೆಗಳಲ್ಲಿ ಶೇಕಡ 80ರಷ್ಟು ಖಾಲಿ ಹುದ್ದೆಗಳನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ

ಅಥವಾ

(ಆ). ಅಧಿಕಾರಯುತ ಸಮಿತಿಯಿಂದ ಹುದ್ದೆಗಳನ್ನು ರದ್ದುಮಾಡುವ ಪ್ರಕ್ರಿಯೆಯಿಂದ ವಿನಾಯಿತಿ ಪಡೆಯಲು ಕ್ರಮ ಕೈಗೊಳ್ಳಲಾಗಿದೆಯೇ?

ಭಾರತದ ರಾಷ್ಟ್ರಪತಿಗಳ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ. ಶಾಮರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಎಫ್.ಆರ್. ಮತ್ತು ಬಿಸಿ.ಸಿ.)

ಇವರಿಗೆ :

1) ಮಹಾಲೇಖಪಾಲರು (ಎ ಮತ್ತು ಇ) / ಆಡಿಟ್ (1 ಮತ್ತು 2), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3) ಎಲ್ಲಾ ಇಲಾಖಾ ಮುಖ್ಯಸ್ಥರು.
4) ಎಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
5) ರಾಜ್ಯದ ಸಾರ್ವಜನಿಕ ಉದ್ಯಮಗಳ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರುಗಳು,
6) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ – ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಣೆಗಾಗಿ.